**All India Radio: Bangalore**
**National Bulletin In Kannada**
**31.05.2026 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**31.05.2026 7.35 am**

**<>><><*><><<>**

ಮುಖ್ಯಾಂಶಗಳು

**೧. ಮನ್ ಕಿ ಬಾತ್: ಭಾರತೀಯರನ್ನುದ್ದೇಶಿಸಿ ಇಂದು ಪ್ರಧಾನಿ ನರೇಂದ್ರ ಮೋದಿ ಮನದ ಮಾತು**

**೨. ಆಪರೇಷನ್ ಸಿಂದೂರ ಸಮಯದಲ್ಲಿ ಪಾಕಿಸ್ತಾನ ನೌಕಾಪಡೆಯನ್ನು ಕಟ್ಟಿಹಾಕಿದ್ದ ಭಾರತೀಯ ನೌಕಾಪಡೆ - ರಕ್ಷಣಾ ಸಚಿವ ರಾಜನಾಥ್ ಸಿಂಗ್**

**೩. ಜಾಗತಿಕ ಅನಿಶ್ಚಿತತೆಯ ಹೊರತಾಗಿಯೂ ಭಾರತದ ಆರ್ಥಿಕ ಕಾರ್ಯಕ್ಷಮತೆ ಸ್ಥಿರ - ಕೇಂದ್ರ ಹಣಕಾಸು ಸಚಿವಾಲಯ**

**೪. ಐಪಿಎಲ್ ಟಿ-೨೦ ಕ್ರಿಕೆಟ್: ಇಂದಿನ ಫೈನಲ್ ಪಂದ್ಯದಲ್ಲಿ ಆರ್‌ಸಿಬಿ-ಗುಜರಾತ್ ಟೈಟನ್ಸ್ ಮುಖಾಮುಖಿ**

<>><><*><><<>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ಇಂದು ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೩೪ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಈ ಕಾರ್ಯಕ್ರಮ ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಬಿತ್ತರಗೊಳ್ಳಲಿದೆ.

**<>><><*><><<>**

ಉಪರಾಷ್ಟ್ರಪತಿ ಸಿ.ಪಿ ರಾಧಾಕೃಷ್ಣನ್, ಇಂದು ದಕ್ಷಿಣಕನ್ನಡ ಜಿಲ್ಲೆ, ಬೆಳ್ತಂಗಡಿಯಲ್ಲಿ ಸಿರಿ ಕೈಗಾರಿಕಾ ಪಾರ್ಕ್ ಉದ್ಘಾಟಿಸಲಿದ್ದಾರೆ. ಬಳಿಕ ಶ್ರೀಕ್ಷೇತ್ರ ಧರ್ಮಸ್ಥಳ ಮಂಜುನಾಥಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡಲಿದ್ದಾರೆ.

<><><*><><>

ಆಪರೇಷನ್ ಸಿಂದೂರ ಸಮಯದಲ್ಲಿ ಭಾರತೀಯ ನೌಕಾಪಡೆಯು ಇಡೀ ಪಾಕಿಸ್ತಾನ ನೌಕಾಪಡೆಯನ್ನು ತನ್ನ ಬಂದರುಗಳಿಗೆ ಸೀಮಿತವಾಗಿರುವಂತೆ ಮಾಡಿತು ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಲಕ್ನೋದಲ್ಲಿ ನೌಕಾ ವಸ್ತುಸಂಗ್ರಹಾಲಯವಾದ 'ನೌಸೇನ ಶೌರ್ಯ ವಾಟಿಕಾ' ಉದ್ಘಾಟನಾ ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಅವರು, ಆಪರೇಷನ್ ಸಿಂದೂರ ಸಮಯದಲ್ಲಿ ಪಾಕಿಸ್ತಾನದ ಮೇಲೆ ಒತ್ತಡವನ್ನು ಕಾಯ್ದುಕೊಳ್ಳುವಲ್ಲಿ ನೌಕಾಪಡೆಯು ಮಹತ್ವದ ಪಾತ್ರ ವಹಿಸಿದೆ ಎಂದರು. ಭಾರತೀಯ ನೌಕಾಪಡೆಯನ್ನು ಅರೇಬಿಯನ್ ಸಮುದ್ರದಲ್ಲಿ ಸಂಪೂರ್ಣ ಸನ್ನದ್ಧತೆ ಮತ್ತು ಬಲದೊಂದಿಗೆ ನಿಯೋಜಿಸಲಾಗಿದ್ದು, ಎದುರಾಳಿಯ ಮೇಲೆ ನಿರಂತರ ಒತ್ತಡವನ್ನು ಕಾಯ್ದುಕೊಳ್ಳಲಾಗಿದೆ ಎಂದು ರಕ್ಷಣಾ ಸಚಿವರು ಹೇಳಿದರು. ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ದಿನೇಶ್ ಕೆ ತ್ರಿಪಾಠಿ ಮಾತನಾಡಿ, ಆಪರೇಷನ್ ಸಿಂದೂರ ಸಮಯದಲ್ಲಿ ಭಾರತೀಯ ನೌಕಾಪಡೆಯು ಸಂಪೂರ್ಣ ಯುದ್ಧ ಸನ್ನದ್ಧತೆ, ಕಾರ್ಯಾಚರಣೆಯ ವ್ಯಾಪ್ತಿ ಮತ್ತು ತಡೆಗಟ್ಟುವ ಸಾಮರ್ಥ್ಯಗಳನ್ನು ಪ್ರದರ್ಶಿಸಿತು ಎಂದು ಹೇಳಿದರು.

**<><><*><><>**

ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘರ್ಷದಿಂದ ಉಂಟಾದ ಜಾಗತಿಕ ಅನಿಶ್ಚಿತತೆಯ ಹೊರತಾಗಿಯೂ ಭಾರತದ ಆರ್ಥಿಕ ಕಾರ್ಯಕ್ಷಮತೆ ಸ್ಥಿರವಾಗಿದೆ. ೨೦೨೬ ರ ಮೇ ನಲ್ಲಿ ಕೇಂದ್ರ ಹಣಕಾಸು ಸಚಿವಾಲಯದ ಮಾಸಿಕ ಆರ್ಥಿಕ ಅವಲೋಕನ-ಎಂಇಆರ್ ಪ್ರಕಾರ, ವಿದೇಶಿ ವಿನಿಮಯ ಮೀಸಲು ಆರಾಮದಾಯಕ ಮಟ್ಟದಲ್ಲಿಯೇ ಉಳಿದಿದೆ. ಜಾಗತಿಕ ಪರಿಸರವು ಭೌತಿಕವಾಗಿ ಹೆಚ್ಚು ಸವಾಲಿನದ್ದಾಗಿದ್ದು, ಹೆಚ್ಚುತ್ತಿರುವ ಕಚ್ಚಾ ತೈಲ ಬೆಲೆಗಳು, ಬಿಗಿಯಾದ ಆರ್ಥಿಕ ಪರಿಸ್ಥಿತಿ ಮತ್ತು ಪ್ರಮುಖ ಆರ್ಥಿಕತೆಗಳಲ್ಲಿ ಬೆಳವಣಿಗೆಯ ಆವೇಗ ದುರ್ಬಲಗೊಳ್ಳುವುದರಿಂದ ಭಾರತೀಯ ಆರ್ಥಿಕತೆಗೆ ತಲೆನೋವಾಗಿದೆ ಎಂದು ಅದು ಹೇಳಿದೆ. ಮೂಲಸೌಕರ್ಯ ಮತ್ತು ಉತ್ಪಾದನಾ ಚಟುವಟಿಕೆಗಳು ಆಧಾರವಾಗಿರುವ ಆವೇಗವನ್ನು ಕಾಯ್ದುಕೊಳ್ಳುತ್ತಿದ್ದರೂ, ಪ್ರಮುಖ ಕೈಗಾರಿಕೆಗಳ ಸೂಚ್ಯಂಕವು ಈ ವರ್ಷದ ಮಾರ್ಚ್‌ನಲ್ಲಿ ಶೇಕಡಾ ೦.೪ ರಷ್ಟು ಅಲ್ಪ ಪ್ರಮಾಣದಲ್ಲಿ ಕುಸಿದಿದೆ. ಹಣದುಬ್ಬರ ಈ ವರ್ಷದ ಮಾರ್ಚ್‌ನಲ್ಲಿ ಶೇಕಡಾ ೩.೪ ರಷ್ಟಿವೆ. ಬ್ಯಾಂಕ್ ಸಾಲದ

ಬೆಳವಣಿಗೆಯು ಸ್ಥಿರವಾಗಿದೆ ಮತ್ತು ವರ್ಷದಿಂದ ವರ್ಷಕ್ಕೆ ಶೇಕಡಾ ೧೭ ಕ್ಕಿಂತ ಹೆಚ್ಚು ಬೆಳೆಯುತ್ತಿದೆ ಎಂದು ಎಂಇಆರ್ ನಲ್ಲಿ ಉಲ್ಲೇಖಿಸಲಾಗಿದೆ.

**<>><><*><><<>**

ಕರ್ನಾಟಕ ಕಾಂಗ್ರೆಸ್ ಶಾಸಕಾಂಗ ಪಕ್ಷದ ನೂತನ ನಾಯಕರಾಗಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಆಯ್ಕೆಯಾಗಿದ್ದಾರೆ. ನಿನ್ನೆ ಸಂಜೆ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಹಂಗಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಅವರನ್ನು ಆಯ್ಕೆ ಮಾಡಲಾಗಿದೆ. ಬಳಿಕ ಡಿ.ಕೆ. ಶಿವಕುಮಾರ್ ಅವರ ಹೆಸರನ್ನು ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕರನ್ನಾಗಿ ಅಧಿಕೃತವಾಗಿ ಘೋಷಿಸಲಾಯಿತು. ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಅವರ ಪ್ರಮಾಣವಚನ ಸ್ವೀಕಾರ ಸಮಾರಂಭ ಜೂನ್ ೩ರಂದು ಲೋಕಭವನದ ಗಾಜಿನ ಮನೆಯಲ್ಲಿ ನಡೆಯಲಿದೆ. ಈ ಕಾರ್ಯಕ್ರಮವನ್ನು ಸಾರ್ವಜನಿಕರಿಗೆ ಯಾವುದೇ ತೊಂದರೆ ಉಂಟಾಗದಂತೆ ಸರಳವಾಗಿ ಆಚರಿಸಲು ಕಾಂಗ್ರೆಸ್ ಪಕ್ಷ ನಿರ್ಧರಿಸಿದೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಜಿ.ಸಿ.ಚಂದ್ರಶೇಖರ್ ತಿಳಿಸಿದ್ದಾರೆ.

**<>><><*><><<>**

ನವದೆಹಲಿಯ ಐಜಿಐ ವಿಮಾನ ನಿಲ್ದಾಣದಲ್ಲಿ ಸ್ಕೈ ಕ್ಯಾಸ್ಟ್ ವ್ಯವಸ್ಥೆಯನ್ನು ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು ಉದ್ಘಾಟಿಸಿದ್ದಾರೆ. ಸ್ಕೈಕಾಸ್ಟ್‌ನಂತಹ ಸುಧಾರಿತ ಹವಾಮಾನ ಮೇಲ್ವಿಚಾರಣಾ ವ್ಯವಸ್ಥೆಗಳು ಮಂಜು ಮತ್ತು ಪ್ರಕ್ಷುಬ್ಧತೆಯ ಸಮಯದಲ್ಲಿ ವಿಮಾನ ಕಾರ್ಯಾಚರಣೆಯನ್ನು ಗಮನಾರ್ಹವಾಗಿ ಸುಧಾರಿಸಬಹುದು ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವರು ಹೇಳಿದ್ದಾರೆ. ಈ ತಂತ್ರಜ್ಞಾನವು ದೇಶಾದ್ಯಂತ ಹೆಚ್ಚಿನ ವಿಮಾನ ನಿಲ್ದಾಣಗಳಿಗೆ ವಿಸ್ತರಿಸಿದಂತೆ, ಇದು ಸುರಕ್ಷತೆಯನ್ನು ಬಲಪಡಿಸುತ್ತದೆ ಮತ್ತು ಪ್ರಯಾಣಿಕರಿಗೆ ಪ್ರಯಾಣದ ಅನುಭವವನ್ನು ಹೆಚ್ಚಿಸುತ್ತದೆ. ನಾಗರಿಕರಿಗೆ ಉತ್ತಮ ಫಲಿತಾಂಶಗಳನ್ನು ನೀಡಲು ವಿಜ್ಞಾನ, ತಂತ್ರಜ್ಞಾನ ಮತ್ತು ವಾಯುಯಾನ ಒಟ್ಟಾಗಿ ಕೆಲಸ ಮಾಡುವ ಇಡೀ ಸರ್ಕಾರಿ ವಿಧಾನಕ್ಕೆ ಈ ಕ್ರಮವು ಒಂದು ಉದಾಹರಣೆಯಾಗಿದೆ ಎಂದು ಸಚಿವ ರಾಮ್ ಮೋಹನ್ ನಾಯ್ಡು ಅಭಿಪ್ರಾಯಪಟ್ಟಿದ್ದಾರೆ.

**<>><><*><><<>**

ರಾಷ್ಟ್ರೀಯ ಆರೋಗ್ಯ ಪ್ರಾಧಿಕಾರ ಜಾರಿಗೆ ತಂದಿರುವ ಆಯುಷ್ಮಾನ್ ಭಾರತ್ ಡಿಜಿಟಲ್ ಮಿಷನ್ ದೇಶಾದ್ಯಂತ ತೊಂಬತ್ತು ಕೋಟಿ ಆಯುಷ್ಮಾನ್ ಭಾರತ್ ಆರೋಗ್ಯ ಖಾತೆಗಳ ಮೈಲಿಗಲ್ಲನ್ನು ದಾಟಿದೆ. ನಾಗರಿಕ-ಕೇಂದ್ರಿತ ಡಿಜಿಟಲ್ ಆರೋಗ್ಯ ಪರಿಸರ ವ್ಯವಸ್ಥೆಯತ್ತ ಭಾರತದ

ಪ್ರಯಾಣದಲ್ಲಿ, ಈ ಸಾಧನೆಯು ಒಂದು ಪ್ರಮುಖ ಹೆಜ್ಜೆಯಾಗಿದೆ ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ತಿಳಿಸಿದೆ.

**<>><><*><><<>**

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ಫೈನಲ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಗುಜರಾತ್ ಟೈಟನ್ಸ್ ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

**<>><><*><><<>**

ಬ್ರಿಸ್ಟಲ್‌ನಲ್ಲಿ ನಿನ್ನೆ ನಡೆದ ಮಹಿಳಾ ಟಿ-೨೦ ಕ್ರಿಕೆಟ್‌ನ ಎರಡನೇ ಅಂತಾರಾಷ್ಟ್ರೀಯ ಪಂದ್ಯದಲ್ಲಿ ಭಾರತ ತಂಡದ ವಿರುದ್ಧ ಇಂಗ್ಲೆಂಡ್ ೨೬ ರನ್‌ಗಳಿಂದ ಜಯ ಗಳಿಸದೆ. ಈ ಮೂಲಕ ಸರಣಿ ೧-೧ ಅಂತರದಿಂದ ಸಮಗೊಂಡಿದೆ.  ಮೊದಲು ಬ್ಯಾಟಿಂಗ್ ಮಾಡಿದ ಇಂಗ್ಲೆಂಡ್ ಮಹಿಳಾ ತಂಡ ನಿಗದಿತ ೨೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೧೬೮ ರನ್ ಗಳಿಸಿತು. ಗೆಲುವಿನ ಗುರಿ ಬೆನ್ನತ್ತಿದ ಭಾರತ ವನಿತಾ ತಂಡ, ೨೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೧೪೨ ರನ್ ಗಳಿಸಲಷ್ಟೇ ಶಕ್ತವಾಯಿತು.

**<>><><*><><<>**

ಸಿಂಗಾಪುರ ಓಪನ್‌ನ ಬ್ಯಾಡ್ಮಿಂಟನ್ ಪಂದ್ಯಾವಳಿಯ ಪುರುಷರ ಡಬಲ್ಸ್ ವಿಭಾಗದ ಫೈನಲ್‌ನಲ್ಲಿಂದು ಭಾರತದ ಸಾತ್ವಿಕ್‌ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ, ಇಂಡೋನೇಷ್ಯಾದ ಮುಹಮ್ಮದ್ ಶೋಹಿಬುಲ್ ಫಿಕ್ರಿ ಮತ್ತು ಫಜರ್ ಅಲ್ಫಿಯಾನ್ ಅವರನ್ನು ಎದುರಿಸಲಿದ್ದಾರೆ.  ಸೆಮಿಫೈನಲ್‌ನಲ್ಲಿ ಸಾತ್ವಿಕ್‌ಸಾಯಿರಾಜ್ ಮತ್ತು ಚಿರಾಗ್ ಶೆಟ್ಟಿ ಜೋಡಿ, ವಿಶ್ವದ ಅಗ್ರ ಶ್ರೇಯಾಂಕಿತ ದಕ್ಷಿಣ ಕೊರಿಯಾದ ಜೋಡಿ ಸಿಯೊ ಸೆಯುಂಗ್-ಜೇ ಮತ್ತು ಕಿಮ್ ವೊನ್-ಹೋ ಅವರನ್ನು ೨೧-೧೯, ೨೧-೧೮ ಸೆಟ್‌ಗಳಿಂದ ಮಣಿಸಿತು.

**<>><><*><><<>**

ವಿಯೆಟ್ನಾಂನ ಡಾ ನಾಂಗ್‌ನಲ್ಲಿ ನಡೆದ ಏಷ್ಯನ್ ೧೭ ವರ್ಷದೊಳಗಿನ ಕುಸ್ತಿ ಚಾಂಪಿಯನ್‌ಶಿಪ್‌ನಲ್ಲಿ ಭಾರತೀಯ ಕುಸ್ತಿಪಟುಗಳು ಅದ್ಭುತ ಪ್ರದರ್ಶನ ನೀಡಿ, ವಿವಿಧ ವಿಭಾಗಗಳಲ್ಲಿ ಹಲವು ಪದಕಗಳನ್ನು ಗೆದ್ದರು. ೭೩ ಕೆಜಿ ವಿಭಾಗದಲ್ಲಿ, ಗರಿಮಾ ಮಂಗೋಲಿಯಾದ ನಮುಂಟ್ಸೆಟ್ಸೆಗ್ ಬ್ಯಾಟ್‌ಬೋಲ್ಡ್ ಅವರನ್ನು ೧೮-೬ ಅಂತರದಿಂದ ಸೋಲಿಸುವ ಮೂಲಕ ಚಿನ್ನದ ಪದಕ

ವಿಜೇತರಾದರು. ೪೩ ಕೆಜಿ ವಿಭಾಗದಲ್ಲಿ, ದೀಕ್ಷಾ, ಉಜ್ಬೇಕಿಸ್ತಾನದ ಮುಖ್ಲಿಸಾ ಮಶಾರಿಪೋವಾ ಅವರನ್ನು ೬-೦ ಅಂತರದಿಂದ ಸೋಲಿಸುವ ಮೂಲಕ ಚಿನ್ನ ಗೆದ್ದರು. ೪೯ ಕೆಜಿ ವಿಭಾಗದಲ್ಲಿ, ನಿಕಿತಾ, ಚೀನಾದ ಯುಟಿಂಗ್ ಯುವಾನ್ ವಿರುದ್ಧ ೧೦-೨ ಅಂತರದಿಂದ ಸೋತ ನಂತರ ಬೆಳ್ಳಿಗೆ ತೃಪ್ತಿಪಟ್ಟರು. ೬೫ ಕೆಜಿ ವಿಭಾಗದಲ್ಲಿ, ಅಂತ್ರಾ ಚೀನಾದ ಸಿಯು ವಿರುದ್ಧ ೫-೦ ಅಂತರದಿಂದ ಸೋಲನುಭಿಸಿದರು. ಆದರೆ, ಚೀನಾದ ಟಾಂಗ್ವಾಂಗ್ ವಿರುದ್ಧ ೪-೬ ಅಂತರದಿಂದ ಕಠಿಣ ಸೋಲಿನ ನಂತರ ತಾನಿಯಾ ಬೆಳ್ಳಿ ಪದಕ ವಿಜೇತರಾದರು. ೪೦ ಕೆಜಿ ವಿಭಾಗದಲ್ಲಿ, ಪಾಲಕ್, ಚೀನಾದ ಮಿನ್ಯಾ ಫಾಂಗ್ ವಿರುದ್ಧ ೬-೨ ಅಂತರದಿಂದ ಜಯಗಳಿಸುವ ಮೂಲಕ ಕಂಚಿನ ಪದಕವನ್ನು ಗೆದ್ದರು. ಏತನ್ಮಧ್ಯೆ, ೪೬ ಕೆಜಿ ವಿಭಾಗದಲ್ಲಿ, ಮಂಗೋಲಿಯಾದ ತನ್ಸರ್ಮಾ ಬಟ್ಸುರಿ ಅವರನ್ನು ೯-೦ ಅಂತರದಿಂದ ಸೋಲಿಸುವ ಮೂಲಕ ಅನಾಮಿಕಾ, ಕಂಚಿನ ಪದಕವನ್ನು ಗೆದ್ದರು. ೫೩ ಕೆಜಿ ವಿಭಾಗದಲ್ಲಿ ಅಕ್ಷರಾ ವಿಯೆಟ್ನಾಂನ ತಿ ಹೋಯೆ ತು ಬುಯಿ ಅವರನ್ನು ೧೦-೦ ಅಂತರದಿಂದ ಸೋಲಿಸಿ ಕಂಚಿನ ಪದಕ ಗೆದ್ದರು. ಸಾಕ್ಷಿ ಕಜಕಿಸ್ತಾನದ ಎರಿನಾ ಕೊನ್ನಿಸೋವಾ ಅವರನ್ನು ಅದೇ ೧೦-೦ ಅಂತರದಿಂದ ಸೋಲಿಸಿ, ೫೩ ಕೆಜಿ ವಿಭಾಗದಲ್ಲಿ ಕಂಚಿನ ಪದಕ ವಿಜೇತರಾದರು. ೬೧ ಕೆಜಿ ವಿಭಾಗದಲ್ಲಿ, ಮಾನ್ಯ ರಜಪೂತ್, ಕಜಕಿಸ್ತಾನದ ಎಗೆರಿಮ್ ಪೊಲಾಟ್ಬೆಕ್ಸ್ ಅವರನ್ನು ೧೦-೦ ಅಂತರದಿಂದ ಸೋಲಿಸುವ ಮೂಲಕ ಭಾರತಕ್ಕೆ ಮತ್ತೊಂದು ಕಂಚಿನ ಪದಕವನ್ನು ತಂದುಕೊಟ್ಟರು.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>**